ಜೆಎಸ್‌ಎಸ್ ಮಹಾವಿದ್ಯಾಪೀಠ
ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಶಿವಾನುಭವ ದಾಸೋಹ–334
# ಹಾಗೂ ಕೃತಿಗಳ ಬಿಡುಗಡೆ

**28 ಫೆಬ್ರವರಿ 2026 * ಶನಿವಾರ * ಸಂಜೆ 6.00**
**ಬಸವ ಜ್ಯೋತಿ ಮಹಾಮನೆ, ಚಂದ್ರಮ್ಮ ಫಾರಂ**
**ಬಾಳೆಮಂಡಿ ರಸ್ತೆ, ಚಿಕ್ಕಹಳ್ಳಿ, ಮೈಸೂರು**

ದಿವ್ಯಾಶೀರ್ವಾದ
**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**
ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಸುತ್ತೂರು ಶ್ರೀಕ್ಷೇತ್ರ

**ತಮಗೆ ಆದರದ ಸ್ವಾಗತ**

## ಅಧ್ಯಕ್ಷತೆ

**ಡಾ. ಹೆಳವರಹುಂಡಿ ಸಿದ್ದಪ್ಪ**

ಅಧ್ಯಕ್ಷರು, ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು, ಮೈಸೂರು

## ಉಪನ್ಯಾಸ ಹಾಗೂ ಕೃತಿಗಳ ಬಿಡುಗಡೆ

**ಶ್ರೀ ಅಂಶಿ ಪ್ರಸನ್ನಕುಮಾರ್**

ಕಾರ್ಯನಿರ್ವಾಹಕ ಸಂಪಾದಕರು, ಕನ್ನಡಪ್ರಭ ಪತ್ರಿಕೆ, ಮೈಸೂರು

ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರು

**ವಿಷಯ : ವಚನಗಳಲ್ಲಿ ಜೀವನ ಮೌಲ್ಯ**

## ಕೃತಿಗಳ ಪರಿಚಯ

**ಪ್ರೊ. ಮೈಸೂರು ಕೃಷ್ಣಮೂರ್ತಿ**

ಸಾಹಿತಿಗಳು ಹಾಗೂ ವಿಶ್ರಾಂತ ಪ್ರಾಧ್ಯಾಪಕರು

**(ಕೃತಿ – ಮನಗೊಳದ ಕಮಲಗಳು)**

**ಡಾ. ಹೆಚ್.ಬಿ. ಬೆಟ್ಟಸ್ವಾಮಿ**

ಸಹಾಯಕ ಪ್ರಾಧ್ಯಾಪಕರು

**(ಕೃತಿ – ಪರತತ್ತ್ವ ಬೆಳೆ)**

**ಶ್ರೀ ಜಿ.ಎಲ್. ತ್ರಿಪುರಾಂತಕ**

ಸಂಯೋಜನಾಧಿಕಾರಿಗಳು

**(ಕೃತಿ – ಕೆಂಡದೊಳರಳಿದ ಮೊಗ್ಗು)**

## ಉಪಸ್ಥಿತರು

**ಶ್ರೀ ದೇವರಾಜು ಪಿ. ಚಿಕ್ಕಹಳ್ಳಿ (ದೇಚಿ)**

ಕೃತಿಗಳ ಲೇಖಕರು

ಪ್ರಾಂಶುಪಾಲರು, ಶಿಕ್ಷ ಪದವಿಪೂರ್ವ ಕಾಲೇಜು, ವರಕೋಡು

## ಆಶಯ ನುಡಿ

**ಶ್ರೀ ಎಂ. ಚಂದ್ರಶೇಖರ್**

ಅಧ್ಯಕ್ಷರು, ಬಸವ ಬಳಗಗಳ ಒಕ್ಕೂಟ, ಮೈಸೂರು

**ಭಜನೆ : ಶ್ರೀ ಶಿವರಾತ್ರೀಶ್ವರ ಭಜನಾ ತಂಡ ಮತ್ತು ಶ್ರೀ ಲಲಿತಾದ್ರಿ ಮಹಿಳಾ ವೇದಿಕೆ**

ಎರಡನೇ ಹಂತ, ಜೆಎಸ್ಎಸ್ ಬಡಾವಣೆ, ಮೈಸೂರು

## ಪ್ರಾಯೋಜಕರು

**ಶ್ರೀ ಪ್ರಭುಸ್ವಾಮಿ**

ಸಮಾಜ ಸೇವಕರು ಮತ್ತು ಉದ್ಯಮಿಗಳು

ಅಧ್ಯಕ್ಷರು, ಕೃಷಿ ಪತ್ತಿನ ಸಹಕಾರ ಸಂಘ, ಚಿಕ್ಕಹಳ್ಳಿ, ಮೈಸೂರು ತಾ.

ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದನಿಲಯಗಳು ಹಾಗೂ ಶಿಕ್ಷಣಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮ ಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ಜನತೆಯ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆಗಳ ಪ್ರಸಾರಕ್ಕಾಗಿ, ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿಯಂಥ ಸಂಸ್ಥೆಗಳ ಮೂಲಕ ಧರ್ಮ ದಾಸೋಹವನ್ನು ಪ್ರಾರಂಭಿಸಿದರು. 1986ರಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಯನ್ನು ಸ್ಥಾಪಿಸಿ ಆಧ್ಯಾತ್ಮಿಕ ಚಿಂತನೆಗೆ ಹೊಸ ಆಯಾಮವನ್ನು ನೀಡಿದರು.

ದತ್ತಿಯ ವತಿಯಿಂದ ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ದಿನಾಂಕ 12.5.1996ರಂದು 'ಶಿವಾನುಭವ ದಾಸೋಹ' ಕಾರ್ಯಕ್ರಮವನ್ನು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

**ಡಾ. ಹೆಳವರಹುಂಡಿ ಸಿದ್ದಪ್ಪರವರು** ವಾಣಿಜ್ಯ ತೆರಿಗೆ ಇಲಾಖೆಯಲ್ಲಿ ವಿವಿಧ ಜಿಲ್ಲೆಗಳಲ್ಲಿ ಸೇವೆ ಸಲ್ಲಿಸಿ, ಅಪರ ಆಯುಕ್ತರಾಗಿ ನಿವೃತ್ತರಾಗಿದ್ದಾರೆ. ಮೈಸೂರಿನ ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷರಾಗಿ, ಭಾರತೀಯ ಜನತಾ ಪಕ್ಷದ ಜಿಲ್ಲಾ ಉಪಾಧ್ಯಕ್ಷರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಸಮಾಜ ಸೇವಾಸಕ್ತರಾದ ಇವರು ಗ್ರಾಮಾಂತರ ಪ್ರದೇಶಗಳಲ್ಲಿ ಶರಣ ಸಾಹಿತ್ಯ ಪರಿಷತ್ತಿನ ಕಾರ್ಯಕ್ರಮಗಳನ್ನು ಕ್ರಿಯಾಶೀಲರಾಗಿ ಆಯೋಜಿಸುತ್ತಿದ್ದಾರೆ.

**ಶ್ರೀ ಅಂಶಿ ಪ್ರಸನ್ನಕುಮಾರ್‌ರವರು** ಕಳೆದ ನಾಲ್ಕು ದಶಕಗಳಿಂದ ಪತ್ರಿಕೋದ್ಯಮದಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಕನ್ನಡಪ್ರಭ ಪತ್ರಿಕೆಯ ಮೈಸೂರು ವಿಭಾಗದ ಕಾರ್ಯನಿರ್ವಾಹಕ ಸಂಪಾದಕರು, ಹಿರಿಯ ಪತ್ರಕರ್ತರು ಮತ್ತು ಸಾಹಿತಿಗಳು. 26ಕ್ಕೂ ಹೆಚ್ಚು ಕೃತಿಗಳನ್ನು ರಚಿಸಿದ್ದಾರೆ. ಸಂಘ ಸಂಸ್ಥೆಗಳಿಂದ ಹಲವಾರು ಪ್ರಶಸ್ತಿಗಳು ಲಭಿಸಿವೆ. ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷರಾಗಿ ಮತ್ತು ಕರ್ನಾಟಕ ಮಾಧ್ಯಮ ಅಕಾಡೆಮಿ ಸದಸ್ಯರಾಗಿ, ಮೈಸೂರು ವಿಶ್ವವಿದ್ಯಾನಿಲಯದ ಪತ್ರಿಕೋದ್ಯಮ ವಿಭಾಗದ ಶೈಕ್ಷಣಿಕ ಪರಿಷತ್ತಿನ ಸದಸ್ಯರಾಗಿ ಕಾರ್ಯನಿರ್ವಹಿಸಿದ್ದಾರೆ. 2025ನೇ ಸಾಲಿನ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರು.

**ಪ್ರೊ. ಮೈಸೂರು ಕೃಷ್ಣಮೂರ್ತಿಯವರು** ನಿವೃತ್ತ ಕನ್ನಡ ಪ್ರಾಧ್ಯಾಪಕರು, ಸಾಹಿತಿಗಳು, ವಾಗ್ಮಿಗಳು, ಸಂಸ್ಕೃತಿ ಚಿಂತಕರು, ಜನಪದ ಗಾಯಕರಾಗಿ ಹೊನ್ನಾರು ತಂಡದೊಂದಿಗೆ ಹಲವಾರು ಕಾರ್ಯಕ್ರಮಗಳನ್ನು ನಡೆಸಿಕೊಡುತ್ತಿದ್ದಾರೆ.

**ಡಾ. ಹೆಚ್.ಬಿ. ಬೆಟ್ಟಸ್ವಾಮಿಯವರು** ಮೈಸೂರಿನ ಬಿಜಿಎಸ್ ಬಿಇಡಿ ಕಾಲೇಜಿನಲ್ಲಿ ಸಹಾಯಕ ಪ್ರಾಧ್ಯಾಪಕರಾಗಿದ್ದಾರೆ. ಮನೆಯಲ್ಲಿ 25 ಸಾವಿರ ಪುಸ್ತಕಗಳನ್ನು ಸಂಗ್ರಹಿಸಿ ಮನೆಯನ್ನೇ ಗ್ರಂಥಾಲಯವನ್ನಾಗಿಸಿರುವ ಪುಸ್ತಕಪ್ರೇಮಿ, ಸಂಸ್ಕೃತಿ ಚಿಂತಕರು ಹಾಗೂ ವಾಗ್ಮಿಗಳಾಗಿದ್ದಾರೆ.

**ಶ್ರೀ ಜಿ.ಎಲ್. ತ್ರಿಪುರಾಂತಕರವರು** ಸಾಹಿತಿಗಳು, ಅಂಕಣ ಬರಹಗಾರರು, ವಾಗ್ಮಿಗಳು ಹಾಗೂ ಛಾಯಾಗ್ರಾಹಕರು. ಸುತ್ತೂರಿನ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳ ಸಂಯೋಜನಾಧಿಕಾರಿಗಳಾಗಿದ್ದಾರೆ.

**ಶ್ರೀ ದೇವರಾಜು ಪಿ. ಚಿಕ್ಕಹಳ್ಳಿ (ದೇಚಿ)ರವರು** ಮೈಸೂರು ತಾಲ್ಲೂಕು ಚಿಕ್ಕಹಳ್ಳಿಯ ಶ್ರೀ ಪ್ರಭುಸ್ವಾಮಿ ಮತ್ತು ಶ್ರೀಮತಿ ರಾಜಮ್ಮನವರ ಸುಪುತ್ರರು. ಎಂಎಸ್ಸಿ, ಬಿಇಡಿ ಪದವೀಧರರು, ವೃತ್ತಿಯಲ್ಲಿ ಜೀವಶಾಸ್ತ್ರ ಉಪನ್ಯಾಸಕರಾಗಿ ಮೈಸೂರು ತಾಲ್ಲೂಕು ವರಕೋಡು ಶಿಕ್ಷ ಪದವಿಪೂರ್ವ ಕಾಲೇಜಿನಲ್ಲಿ ಪ್ರಾಂಶುಪಾಲರಾಗಿ ಹಾಗೂ ಮೈಸೂರು ತಾಲ್ಲೂಕು ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಆಧುನಿಕ ವಚನಕಾರರು, ಸಾಹಿತಿಗಳು, ಗಾಯಕರು, ನಾಟಕಕಾರರು, ಕಿರುಚಿತ್ರ ನಿರ್ದೇಶಕರು ಹಾಗೂ ಕಲಾವಿದರು ಆಗಿದ್ದಾರೆ. ಸಂಘ ಸಂಸ್ಥೆಗಳಿಂದ ಸನ್ಮಾನ ಪ್ರಶಸ್ತಿಗಳಿಗೆ ಭಾಜನರಾಗಿದ್ದಾರೆ. ಹೂ ಚೆಲುವಿ, ಜಾತಿಯಿಲ್ಲದ ಜ್ಯೋತಿ, ವಚನ ದೀವಿಗೆ ಕೃತಿಗಳನ್ನು ಹೊರತಂದಿದ್ದಾರೆ. ವಿವಿಧ ಸಂಘ ಸಂಸ್ಥೆಗಳಲ್ಲಿ ಸಂಚಾಲಕರು, ಕಾರ್ಯದರ್ಶಿಗಳು, ನಿರ್ದೇಶಕರು, ಸಲಹೆಗಾರರು, ಸದಸ್ಯರು ಹಾಗೂ ಅಧ್ಯಕ್ಷರಾಗಿಯೂ ಕಾರ್ಯನಿರ್ವಹಿಸುತ್ತಿದ್ದಾರೆ.

**ಶ್ರೀ ಎಂ. ಚಂದ್ರಶೇಖರ್‌ರವರು** ಮೈಸೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ. ಕನ್ನಡ ಸಾಹಿತ್ಯ ಕಲಾಕೂಟದ ಸಂಸ್ಥಾಪಕ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಉತ್ತಮ ಸಂಘಟಕರಾಗಿ ಕನ್ನಡ ನಾಡು, ನುಡಿಗೆ ಸಂಬಂಧಿಸಿದ ವಿಷಯಗಳಲ್ಲಿ ಪ್ರಮುಖ ಪಾತ್ರ ವಹಿಸುತ್ತಾ ಬಂದಿದ್ದಾರೆ. ಮೈಸೂರಿನ ಸಾಮಾಜಿಕ, ಸಾಹಿತ್ಯಿಕ ಕಾರ್ಯಕ್ರಮಗಳಲ್ಲಿ ಪ್ರಾಸ್ತಾವಿಕ ನುಡಿಗಳ ಮೂಲಕ 'ಪ್ರಾಸ್ತಾವಿಕ ಚಂದ್ರು' ಎಂಬ ಹೆಸರಿಗೆ ಪಾತ್ರರಾಗಿರುತ್ತಾರೆ. 2026ರಲ್ಲಿ ನಡೆಯಲಿರುವ ಬಸವಬಳಗಗಳ ಒಕ್ಕೂಟದ ಅಧ್ಯಕ್ಷರಾಗಿ ಮೈಸೂರಿನಲ್ಲಿ ಬಸವಜಯಂತಿ ಯಶಸ್ವಿಯಾಗಿ ಜರುಗಲು ಕಾರ್ಯನಿರ್ವಹಿಸುತ್ತಿದ್ದಾರೆ.

**ಶ್ರೀ ಪ್ರಭುಸ್ವಾಮಿಯವರು** ಚಿಕ್ಕಹಳ್ಳಿ ಗ್ರಾಮದವರು. ಸಮಾಜ ಸೇವಕರು ಮತ್ತು ಉದ್ಯಮಿಗಳು. ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿದ್ದಾರೆ. ಇಬ್ಬರು ಗಂಡು ಮಕ್ಕಳು ಶ್ರೀ ಪಿ. ರಾಜೇಂದ್ರ ಹಾಗೂ ಶ್ರೀ ದೇವರಾಜು ಪಿ. ಚಿಕ್ಕಹಳ್ಳಿ (ದೇಚಿ) ಯವರ ತಂದೆಯವರು ಈ ಕಾರ್ಯಕ್ರಮದ ಪ್ರಾಯೋಜಕರಾಗಿದ್ದಾರೆ. ಮೈಸೂರು ಬಸವ ಬಳಗ ಟ್ರಸ್ಟ್‌ನ (ಪೂರ್ವ ವಲಯ) ಸಹಯೋಗದೊಂದಿಗೆ ಈ ಕಾರ್ಯಕ್ರಮ ಜರುಗಲಿದೆ.